ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ): ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ ಮತ್ತು ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಯಸ್ಕರ ಶಿಕ್ಷಣ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ವಿದ್ಯಾ ಪೀಠಗಳನ್ನು ಬಳಸಿಕೊಳ್ಳುವ ಯೋಜನೆ ಸರ್ಕಾರಕ್ಕೆ ಇದೆಯೇ;

ಆ) ಆಧುನಿಕ ಶಿಕ್ಷಣ ಪದ್ಧತಿಗಳನ್ನು ಬಳಸಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೆ; ವಯಸ್ಕರ ಶಿಕ್ಷಣವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಖಾಸಗಿಯವರನ್ನು ಒಳಗೊಳ್ಳುವ ಇಲ್ಲವೆ ಅವರಿಗೆ ವಹಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರಕಾರ ಹಾಕಿಕೊಳ್ಳಲಾಗಿರುವ ಯೋಜನೆಗಳೇನು?

ಶ್ರೀ ಬಾಬುರಾವ್ ಚವ್ವಾಣ್: (ವಯಸ್ಕರ ಶಿಕ್ಷಣ, ಗ್ರಂಥಾಲಯ ಮತ್ತು ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ವಿದ್ಯಾ ಪೀಠಗಳಲ್ಲಿ ಗ್ರಾಮೀಣ ನಿರುದ್ಯೋಗಿ ಯುವಕರಿಗೆ ವೃತ್ತಿ ಕೌಶಲ್ಯ ತರಬೇತಿಗಳನ್ನು ನೀಡಲಾಗುತ್ತಿದ್ದು ಇವುಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುತ್ತಿದೆ.

ಆ) ಹೌದು. ಸಾಕ್ಷರತಾ ಕಾರ್ಯಕ್ರಮಗಳಲ್ಲಿ ಸಂಘ ಸಂಸ್ಥೆಗಳ ಸಹಕಾರ ಪಡೆಯಲಾಗುತ್ತಿದೆ. ಪೂರ್ಣವಾಗಿ ಖಾಸಗಿಯವರಿಗೇ ವಹಿಸಿಕೊಡುವ ವಿಚಾರ ಸರ್ಕಾರದ ಮುಂದೆ ಇಲ್ಲ.

ಅಭಿವೃದ್ಧಿ ಇಲಾಖೆಗಳಲ್ಲಿ ವೃಂದ ಅಧಿಕಾರಿಗಳ ನೇಮಕಾತಿ.

೧೩೯೪(೧೬೩೨)

ಶ್ರೀ ಎ.ಎಸ್.ಗುರುಸ್ವಾಮಿ (ಚಾಮುಂಡೇಶ್ವರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

೧. ಜಿಲ್ಲಾ ಪಂಚಾಯತ್ ಸಂಸ್ಥೆಗಳಲ್ಲಿ ತನ್ನದೇ ಆದ ವೃಂದದ ಅಧಿಕಾರಿಗಳನ್ನು ಹೊಂದಿರುವುದು ಅಭಿವೃದ್ಧಿ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನದ ದೃಷ್ಟಿಯಿಂದ ಅಪೇಕ್ಷಣೀಯವಲ್ಲವೆ;

೨. ವಿವಿಧ ಇಲಾಖೆಗಳಿಂದ ಡೆಪ್ಯುಟೇಶನ್ ಆಧಾರದ ಮೇಲೆ ಬರುವ ಅಧಿಕಾರಿಗಳು ಅಭಿವೃದ್ಧಿ ಕಾರ್ಯದ ಮಾಹಿತಿ ಇಲ್ಲದ ಕಾರಣ ಉದ್ದೇಶಿತ ಫಲ ಲಭ್ಯವಾಗುವುದಿಲ್ಲ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

೩. ಅಭಿವೃದ್ಧಿ ಇಲಾಖೆಗಳಲ್ಲಿ ತನ್ನದೇ ವೃಂದದ ಅಧಿಕಾರಿಗಳನ್ನು ನೇಮಕ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಹಾಗೂ ನೇಮಕಾತಿಗೆ ಏನಾದರೂ ಪ್ರಸ್ತಾವನೆ ಇದೆಯೇ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

೧. ಇಲ್ಲ.

೨. ವಿವಿಧ ಇಲಾಖೆಯ ಅಧಿಕಾರಿ : ನೌಕರರು ನಿಯೋಜನೆ ಮೇಲೆ ಬಂದು ಜಿಲ್ಲಾ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ.

೩. ಪ್ರತಿಯೊಂದು ಜಿಲ್ಲಾ ಪಂಚಾಯ್ತಿಗೂ ಅನ್ವಯಿಸುವಂತೆ ಅದರಲ್ಲಿನ ಪ್ರತಿಯೊಂದು ಹುದ್ದೆಗೂ ಸಂಬಂಧಿಸಿದಂತೆ ನೇಮಕಾತಿಯ ವಿಧಾನ ಮತ್ತು ಕನಿಷ್ಠ ಅರ್ಹತೆಗಳನ್ನು ನಿಗದಿಪಡಿಸುವುದರೊಂದಿಗೆ ಸರ್ಕಾರವು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿದೆ. ಅದರ ರೀತ್ಯಾ ನೇಮಕಾತಿ ವಿಧಾನವನ್ನು ಸಹ ನಿಗದಿಪಡಿಸಲಾಗಿದೆ. ಅಭಿವೃದ್ಧಿ ಇಲಾಖೆಗೆ ಸೇರಿದಂತೆ ನಿರ್ದಿಷ್ಟಪಡಿಸಿದ ಇಲಾಖೆಗಳಿಂದ ಅಧಿಕಾರಿಗಳನ್ನು : ನೌಕರರನ್ನು ನಿಯೋಜಿಸಲು ಅವಕಾಶವಿದೆ.

ಮೈಸೂರು ಜಿಲ್ಲಾ ಪಂಚಾಯಿತ್‌ನಲ್ಲಿ ಆಂತರಿಕ ಆರ್ಥಿಕ ಸಲಹೆಗಾರರ ನೇಮಕ ಮತ್ತು ಕಾರ್ಯ ವ್ಯಾಪ್ತಿ.

೧೩೯೫(೧೬೩೩)

ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲಾ ಪಂಚಾಯತ್‌ನಲ್ಲಿ ಆಂತರಿಕ ಹಣಕಾಸು ಸಲಹೆಗಾರರ ನೇಮಕಾತಿ ಆಗಿದೆಯೆ?